All India Radio: Bangalore
National Bulletin In Kannada
15.09.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಕೊಲ್ಕೊತ್ತಾದಲ್ಲಿಂದು ಸಂಯುಕ್ತ ಸೇನಾಧಿಕಾರಿಗಳ ಸಭೆ ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಬಿಹಾರದಲ್ಲಿಂದು ೪೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿರುವ ಪ್ರಧಾನಿ
3. ಭಾರತ, ೨೦೪೭ ವೇಳೆಗೆ ೩೦ ಟ್ರಿಲಿಯನ್ ಡಾಲರ್ ಮೌಲ್ಯದ ಆರ್ಥಿಕತೆಯಾಗಲಿದೆ - ಕೇಂದ್ರ ಸಚಿವ ಪಿಯೂಷ್ ಗೋಯಲ್
4. ವಕ್ಫ್ ಆಸ್ತಿ ಡಿ-ನೋಟಿಫಿಕೇಷನ್ ಅಧಿಕಾರದ ಕುರಿತು ಇಂದು ಮಧ್ಯಂತರ ಆದೇಶ ಹೊರಡಿಸಲಿರುವ ಸುಪ್ರೀಂ ಕೋರ್ಟ್
5. ಏಷ್ಯಾಕಪ್ ಟಿ-೨೦ ಕ್ರಿಕೆಟ್ ; ಪಾಕಿಸ್ತಾನದ ವಿರುದ್ಧ ಭಾರತಕ್ಕೆ ೭ ವಿಕೆಟ್‌ಗಳ ಭರ್ಜರಿ ಜಯ

<><><><>

ಕೊಲ್ಕತ್ತಾದ ವಿಜಯದುರ್ಗ್‌ನಲ್ಲಿರುವ ಭಾರತೀಯ ಸೇನೆಯ ಪೂರ್ವ ಕಮಾಂಡ್‌ನ ಪ್ರಧಾನ ಕಚೇರಿಯಲ್ಲಿಂದು ನಡೆಯುವ ಸಂಯುಕ್ತ ಸೇನಾಧಿಕಾರಿಗಳ ಸಭೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ಈ ಸಭೆ ಇದೇ ೧೭ರವರೆಗೆ ನಡೆಯಲಿದೆ. ಈ ಸಂದರ್ಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉಪಸ್ಥಿತರಿರಲಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಿನ್ನೆ ಸಂಜೆ ಕೊಲ್ಕತ್ತಾಕ್ಕೆ ಆಗಮಿಸಿದ್ದು, ರಾಜಭವನದಲ್ಲಿ ರಾತ್ರಿ ತಂಗಿದ್ದಾರೆ. ಮೂರು ದಿನಗಳ ಈ ಸಭೆಯಲ್ಲಿ ತಾಂತ್ರಿಕ ಅಭಿವೃದ್ಧಿ, ಸಶಸ್ತ್ರ ಪಡೆಗಳ ಮೂರು ಪಡೆಗಳ ನಡುವಿನ ಸಹಕಾರ, ಸೇನೆಯ ಆಧುನೀಕರಣ ಹಾಗೂ ಪ್ರಸ್ತುತ ಜಾಗತಿಕ ರಾಜಕೀಯ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಹಲವಾರು ಪ್ರಮುಖ ವಿಚಾರಗಳ ಬಗ್ಗೆ ಚರ್ಚೆ ನಡೆಯಲಿದೆ.

<><><><>

ಚುನಾವಣೆಗೆ ಸಜ್ಜಾಗುತ್ತಿರುವ ಬಿಹಾರದ ಪುರ್ನಿಯಾ ಜಿಲ್ಲೆಯಲ್ಲಿ ೪೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಉತ್ತರ ಬಿಹಾರದಲ್ಲಿನ ಹೊಸ ವಿಮಾನ ನಿಲ್ದಾಣದ ಟರ್ಮಿನಲ್‌ನ ಉದ್ಘಾಟನೆ ಕೂಡ ನಡೆಯಲಿದೆ. ಪ್ರಧಾನಿ, ರಾಷ್ಟ್ರೀಯ ಮಖಾನಾ ಮಂಡಳಿಯ ಉದ್ಘಾಟನೆಯನ್ನು ಸಹ ನೆರವೇರಿಸಲಿದ್ದಾರೆ. ಈ ಮಂಡಳಿಯ ಸ್ಥಾಪನೆಯ ಬಗ್ಗೆ ಈ ವರ್ಷ ಕೇಂದ್ರ ಆಯವ್ಯಯದಲ್ಲಿ ಘೋಷಿಸಲಾಗಿತ್ತು. ಇದೇ ವೇಳೆ ಪ್ರಧಾನಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಮಖಾನಾ ಮತ್ತು ಬಿಹಾರದ ಸಂಬಂಧ ಬಹಳ ಗಾಢವಾಗಿದೆ. ರಾಷ್ಟ್ರೀಯ ಮಖಾನಾ ಮಂಡಳಿಯಿಂದ ಈ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಸಾವಿರಾರು ರೈತರಿಗೆ ಲಾಭವಾಗಲಿದೆ ಎಂದು ತಿಳಿಸಿದ್ದಾರೆ. ವಿದ್ಯುತ್ ವಲಯಕ್ಕೆ ಸಂಬಂಧಿಸಿದಂತೆ ಪ್ರಧಾನಿ, ಬಾಗಲ್ಪುರ್‌ನಲ್ಲಿ ೨ ಸಾವಿರದ ೪೦೦ ಮೆಗಾವ್ಯಾಟ್ ಉಷ್ಣವಿದ್ಯುತ್ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

<><><>

ಭಾರತವು ೨೦೪೭ ವೇಳೆಗೆ ೩೦ ಟ್ರಿಲಿಯನ್ ಡಾಲರ್ ಮೌಲ್ಯದ ಆರ್ಥಿಕತೆ ಆಗಿ ರೂಪುಗೊಳ್ಳಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಖಾಸಗಿ ಮಾಧ್ಯಮ ಸಂಸ್ಥೆಯ ವಾರ್ಷಿಕ ಸಮಾವೇಶದಲ್ಲಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಹಣದುಬ್ಬರ ನಿಯಂತ್ರಣದಲ್ಲಿರುವುದನ್ನು ಉಲ್ಲೇಖಿಸಿ, ೨೦೧೪ರಲ್ಲಿ ಅಧಿಕಾರಕ್ಕೆ ಬಂದಾಗಿನಿಂದಲೇ ಬೆಲೆ ನಿಯಂತ್ರಣ ಸರ್ಕಾರದ ಪ್ರಾಥಮಿಕ ಗುರಿಯಾಗಿದೆ ಎಂದು ಹೇಳಿದರು. ಭಾರತದ ಆರ್ಥಿಕ ನೀತಿಗಳ ಮೇಲೆ ನಿರಂತರವಾಗಿ ನಿಗಾ ಇಡುವ ಜವಾಬ್ದಾರಿಯನ್ನು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾಗೆ ನೀಡಲಾಗಿದೆ ಎಂದ ಅವರು, ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ನೀಡಲಾಗುತ್ತಿರುವ ಬೆಂಬಲದ ಕುರಿತು ಪ್ರಸ್ತಾಪಿಸಿದರು. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು, ತೆರಿಗೆ ವ್ಯವಸ್ಥೆಯನ್ನು ಸುಲಭಗೊಳಿಸಿದ್ದು, ಅಡಚಣೆಗಳನ್ನು ಕಡಿಮೆ ಮಾಡಿವೆ

ಎಂದು ಹೇಳಿದರು. ೨೦೧೭ರಲ್ಲಿ ಜಾರಿಗೆ ಬಂದ ಸರಕು ಮತ್ತು ಸೇವಾ ತೆರಿಗೆಯನ್ನು ಅವರು, ಸ್ವಾತಂತ್ರ್ಯ ನಂತರದ "ಅತಿದೊಡ್ಡ ಆರ್ಥಿಕ ಪರಿವರ್ತನೆ" ಎಂದು ಬಣ್ಣಿಸಿದರು.

ಧ್ವನಿ : ಪಿಯೂಷ್ ಗೋಯಲ್ (೨೩ ಸೆಕೆಂಡ್‌ಗಳು)

<><><><>

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿರತವಾಗಿ ಶ್ರಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ಈ ವಿಶೇಷ ಸರಣಿ - "ಸೇವಾ ಪರ್ವ" ದಲ್ಲಿಂದು, ಕೇಂದ್ರ ಸರ್ಕಾರವು ನಮ್ಮ ಪರಿಸರ ಮತ್ತು ಜೀವವೈವಿಧ್ಯವನ್ನು ಹೇಗೆ ಸಕಾರಾತ್ಮಕವಾಗಿ ಪರಿವರ್ತಿಸಿದೆ ಎಂಬುವುದರ ಕುರಿತ ಒಂದು ವರದಿ ಇಲ್ಲಿದೆ. ಪ್ರಾಚೀನ ವೈದಿಕ ಜ್ಞಾನದ ಪ್ರಕಾರ- ಭೂಮಿ ನಮ್ಮ ತಾಯಿ ಮತ್ತು ನಾವು ಅವಳ ಮಕ್ಕಳಾಗಿದ್ದೇವೆ. ಕಳೆದ ೧೧ ವರ್ಷಗಳಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಪರಿಸರ ಸಾಮರಸ್ಯದೆಡೆಗೆ ಭಾರತದ ಪಯಣ ಸಾಗಿದೆ. ಪ್ರಾಜೆಕ್ಟ್ ಟೈಗರ್ ಮತ್ತು ಪ್ರಾಜೆಕ್ಟ್ ಲಯನ್ ನಿಂದ ಮಹತ್ವಾಕಾಂಕ್ಷೆಯ ಪ್ರಾಜೆಕ್ಟ್ ಚೀತಾ ವರೆಗೆ, ದೇಶವು ವನ್ಯಜೀವಿಗಳು ಆವಾಸಸ್ಥಾನಗಳನ್ನು ಬಲಪಡಿಸಿದೆ. ಭಾರತವು ಇಂದು  ವಿಶ್ವದಲ್ಲೇ ಅತೀ ಹೆಚ್ಚು ಹುಲಿಗಳನ್ನು ಹೊಂದಿದೆ. ಏಷ್ಯಾಟಿಕ್ ಸಿಂಹಗಳ ಸಂಖ್ಯೆಯು ೮೯೧ ಕ್ಕೆ ಏರಿದೆ, ಕಳೆದ ದಶಕದಲ್ಲಿ ಅವುಗಳ ಸಂಖ್ಯೆಯಲ್ಲಿ ಗಮನಾರ್ಹ ಶೇಕಡಾ ೭೦ ರಷ್ಟು ಏರಿಕೆಯಾಗಿದೆ. ಚಿರತೆಗಳು ಏಳು ದಶಕಗಳ ನಂತರ ದೇಶಕ್ಕೆ ಮರಳಿದ್ದು, ಪರಿವರ್ತನಾತ್ಮಕ ಪ್ರಾಜೆಕ್ಟ್ ಚೀತಾದ ಭಾಗವಾಗಿ ಭಾರತೀಯ ನೆಲದಲ್ಲಿ ಹೊಸ ಮರಿಗಳಿಗೆ ಜನ್ಮ ನೀಡಿದೆ. ನಮ್ಮ ಜೌಗು ಪ್ರದೇಶಗಳು ಸಹ ಹೊಸ ಗಮನ ಸೆಳೆಯುತ್ತಿವೆ. ಭಾರತವು ಈಗ ಏಷ್ಯಾದಲ್ಲೇ ಅತಿಹೆಚ್ಚಿನ ಅಂದರೆ ೯೧ ರಾಮ್‌ಸರ್ ತಾಣಗಳನ್ನು ಹೊಂದಿದ್ದು, ವಲಸೆ ಹಕ್ಕಿಗಳು ಮತ್ತು ದುರ್ಬಲ ಪರಿಸರ ವ್ಯವಸ್ಥೆಗಳನ್ನು ರಕ್ಷಿಸುತ್ತಿದೆ. 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದ ಅಡಿಯಲ್ಲಿ ೧೪೨ ಕೋಟಿಗೂ ಹೆಚ್ಚು ಮರಗಳನ್ನು ನೆಡಲಾಗಿದೆ. ಏತನ್ಮಧ್ಯೆ, ಅರಣ್ಯ ಪ್ರದೇಶವು ಸ್ಥಿರವಾಗಿ ವಿಸ್ತರಿಸಿದೆ. ಸ್ಪಷ್ಟ ನೀತಿಗಳು, ಸಾರ್ವಜನಿಕ ಭಾಗವಹಿಸುವಿಕೆಯ ಮೂಲಕ, ಕೇಂದ್ರ ಸರ್ಕಾರವು ಎಲ್ಲರಿಗೂ ಹಸಿರು, ಆರೋಗ್ಯಕರ ಮತ್ತು ಹೆಚ್ಚು ಸುರಕ್ಷಿತ ಭವಿಷ್ಯವನ್ನು ನಿರ್ಮಿಸಲು ಕೆಲಸ ಮಾಡುತ್ತಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೨೨ರಂದು ತ್ರಿಪುರಾ ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು ಪ್ರಸಿದ್ಧ ಮಾತಾ ತ್ರಿಪುರಸುಂದರಿ ದೇವಸ್ಥಾನದ ಪುನರ್ ಅಭಿವೃದ್ಧಿ ಹಾಗೂ ಸುಂದರೀಕರಣ ಯೋಜನೆಗೆ ಚಾಲನೆ ನೀಡಲಿದ್ದಾರೆ ಎಂದು ತ್ರಿಪುರ ಮುಖ್ಯಮಂತ್ರಿ ಡಾ. ಮಾಣಿಕ್ ಸಾಹಾ ತಿಳಿಸಿದ್ದಾರೆ. ಮೆಲಾಘರ್‌ನಲ್ಲಿ ನಡೆದ ನೀರ್ಮಹಲ್ ಜಲ್ ಉತ್ಸವದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಎಲ್ಲಾ ಪ್ರಮುಖ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಬದ್ಧವಾಗಿದೆ. ಗೋಮತಿ ಜಿಲ್ಲೆಯಲ್ಲಿ ೯೭ ಕೋಟಿ ರೂಪಾಯಿ ವೆಚ್ಚದಲ್ಲಿ ಎಲ್ಲಾ ೫೧ ಶಕ್ತಿಪೀಠಗಳ ಪ್ರತಿರೂಪಗಳನ್ನು ನಿರ್ಮಿಸಲಾಗುತ್ತಿದೆ ಎಂದರು.

<><><><>

ವಕ್ಫ್ ಎಂದು ಘೋಷಿಸಲಾದ ಆಸ್ತಿಗಳನ್ನು ಡಿನೋಟಿಫೈ ಮಾಡುವ ಅಧಿಕಾರದ ಕುರಿತು ಸುಪ್ರೀಂ ಕೋರ್ಟ್ ಇಂದು ಮಧ್ಯಂತರ ಆದೇಶ ನೀಡಲಿದೆ. ನ್ಯಾಯಾಲಯಗಳಿಂದ ಅಥವಾ ಬಳಕೆದಾರರಿಂದ ವಕ್ಫ್ ಎಂದು ಘೋಷಿಸಲಾದ ಆಸ್ತಿಗಳನ್ನು ಡಿನೋಟಿಫೈ ಮಾಡಲು ಯಾರು ಅಧಿಕಾರ ಹೊಂದಿರುತ್ತಾರೆ ಎಂಬ ಪ್ರಶ್ನೆಗೆ ಇಂದು ಉತ್ತರ ಸಿಗುವ ನಿರೀಕ್ಷೆಯಿದೆ. ೨೦೨೫ರ ವಕ್ಫ್ ತಿದ್ದುಪಡಿ ಕಾಯಿದೆ ಮಾನ್ಯತೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯ ಸಂದರ್ಭ ಈ ವಿಚಾರ ಹೊರಬಂದಿದೆ. ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಮತ್ತು ನ್ಯಾಯಮೂರ್ತಿ ಅಗಸ್ಟಿನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ಪೀಠ, ಮೇ ೨೦ರಿಂದ ೨೨ರವರೆಗೆ ಮೂರು ದಿನಗಳ ವಾದಗಳು ನಡೆದ ನಂತರ ಆದೇಶವನ್ನು ಕಾಯ್ದಿರಿಸಿತ್ತು. ಇಂದಿಗಾಗಿ ಸುಪ್ರೀಂ ಕೋರ್ಟ್ ಜಾಲತಾಣದಲ್ಲಿ ಪ್ರಕಟಿತ ವಿಚಾರಣಾ ಪಟ್ಟಿಯ ಪ್ರಕಾರ, ನ್ಯಾಯಾಲಯ ಇಂದು ತನ್ನ ಮಧ್ಯಂತರ ಆದೇಶವನ್ನು ಪ್ರಕಟಿಸಲಿದೆ.

<><><><>

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಏಷ್ಯಾಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಪಂದ್ಯದಲ್ಲಿ ಭಾರತ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದ ವಿರುದ್ಧ ೭ ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದೆ. ಮೊದಲು ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಪಾಕಿಸ್ತಾನ ೧೯.೩ ಓವರ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡು ಕೇವಲ ೧೨೭ ರನ್‌ಗಳಿಸಲಷ್ಟೇ ಶಕ್ತವಾಯಿತು. ಪ್ರತ್ಯುತ್ತರವಾಗಿ ಈ ಅಲ್ಪ ಮೊತ್ತವನ್ನು ಬೆನ್ನತ್ತಿದ ಭಾರತ ಅಭಿಷೇಕ್ ಶರ್ಮ ಅವರ ೩೧ ಹಾಗೂ ಸೂರ್ಯಕುಮಾರ್ ಯಾದವ್ ಅವರ ಅಜೇಯ

೪೭ ರನ್ ನೆರವಿನೊಂದಿಗೆ ಇನ್ನು ೨೫ ಎಸೆತಗಳು ಬಾಕಿ ಇರುವಂತೆ ಗುರಿ ತಲುಪಿ ಗೆಲುವು ತನ್ನದಾಗಿಸಿಕೊಂಡಿತು. ಪಂದ್ಯದ ನಂತರ ಮಾತನಾಡಿದ ನಾಯಕ ಸೂರ್ಯಕುಮಾರ್ ಯಾದವ್ ಈ ಗೆಲುವನ್ನು ಭಾರತೀಯ ಸಶಸ್ತ್ರ ಪಡೆಗಳಿಗೆ ಸಮರ್ಪಿಸಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸಂತ್ರಸ್ತ ಕುಟುಂಬಗಳೊಂದಿಗೆ ಹಾಗೂ ಅಪರೇಷನ್ ಸಿಂದೂರ್ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಮಿಲಿಟರಿ ಸಿಬ್ಬಂದಿಯೊಂದಿಗೆ ತಮ್ಮ ತಂಡ ನಿಂತಿರುವುದಾಗಿ ಅವರು ತಿಳಿಸಿದರು. ಪ್ರಸ್ತುತ ಅಂಕಪಟ್ಟಿಯಲ್ಲಿ ಭಾರತ ೨ ಗೆಲುವಿನೊಂದಿಗೆ ಅಗ್ರಸ್ಥಾನದಲ್ಲಿದೆ. ನಾಳೆ ನಡೆಯಲಿರುವ ಪಂದ್ಯದಲ್ಲಿ ಭಾರತ ಹಾಂಕಾಂಗ್ ತಂಡವನ್ನು ಎದುರಿಸಲಿದೆ.

<><><><>

ಚೀನಾದ ಹ್ಯಾಂಗ್‌ಝೌ ನಲ್ಲಿ ನಡೆದ ಏಷ್ಯಾಕಪ್ ಹಾಕಿ ಪಂದ್ಯಾವಳಿಯಲ್ಲಿ ಭಾರತೀಯ ಮಹಿಳಾ ಹಾಕಿ ತಂಡ ಬೆಳ್ಳಿ ಪದಕ ಗೆದ್ದಿದೆ. ನಿನ್ನೆ ನಡೆದ ಫೈನಲ್‌ನಲ್ಲಿ ಚೀನಾ ವಿರುದ್ಧ ಭಾರತ ೧-೪ ರ ಅಂತರದಲ್ಲಿ ಸೋಲನುಭವಿಸಿದರೂ, ಟೂರ್ನಿಯಲ್ಲಿ ಒಟ್ಟಾರೆಯಾಗಿ ಮಹಿಳಾ ತಂಡ ತೋರಿದ ಪ್ರದರ್ಶನ, ಬದ್ಧತೆ ಮತ್ತು ಶ್ರಮದ ಪ್ರತೀಕವಾಗಿತ್ತು. ಪ್ರಧಾನಿ ನರೇಂದ್ರ ಮೋದಿ, ಬೆಳ್ಳಿ ಪದಕ ಜಯಿಸಿದ್ದಕ್ಕಾಗಿ ಭಾರತೀಯ ಮಹಿಳಾ ಹಾಕಿ ತಂಡವನ್ನು ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ತಂಡದ ಪ್ರದರ್ಶನವನ್ನು ಶ್ಲಾಘಿಸಿದ್ದು, ಮಹಿಳಾ ಹಾಕಿ ತಂಡ ದೇಶವನ್ನು ಹೆಮ್ಮೆ ಪಡುವಂತೆ ಮಾಡಿದೆ ಎಂದಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>